**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2019-20ನೇ ಸಾಲಿನ ಜಲಾನಯನ ಅಭಿವೃದ್ಧಿ ಇಲಾಖೆಯ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (KWDP-II) ಸುಜಲ-III (EAP) ಯೋಜನೆಗೆ ಅನುದಾನ ಬಿಡುಗಡೆ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಕೃಇ 41 ಕೃಯೋಕಾ 2019, ದಿನಾಂಕ:02-04-2019.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಯೋಕಾ 2019, ದಿನಾಂಕ:13-05-2019 ಮತ್ತು 06.08.2019.
3. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ2019, ದಿನಾಂಕ:04-07-2019.
4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 53 ವೆಚ್ಚ-4/2019 ದಿನಾಂಕ 17.07.2019.
5. ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತರ ಪ್ರಸ್ತಾವನೆ ಸಂಖ್ಯೆ:ಜಅಇ/ಸುಜಲ-3 /EAP/ಅನುದಾನ ಬಿಡುಗಡೆ/2019-20, ದಿನಾಂಕ: 14-10-2019 ಮತ್ತು 21.12.2019.
6. ಸರ್ಕಾರದ ಆದೇಶ ಸಂಖ್ಯೆ: AGRI-AML/103/2019, dated 31.12.2019.

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2019-20ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ. ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (KWDP-II) ಸುಜಲ-III (EAP) ಯೋಜನೆಗೆ 2019-20ನೇ ಸಾಲಿಗೆ ರೂ.50.00 ಕೋಟಿಗಳ ಅನುದಾನ ಕಲ್ಪಿಸಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶಗಳನ್ವಯ, 2019-20ನೇ ಸಾಲಿನ ಜಲಾನಯನ ಅಭಿವೃದ್ಧಿ ಇಲಾಖೆಯ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (KWDP-II) ಸುಜಲ-III (EAP) ಯೋಜನೆಗೆ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವಾಗಿ ರೂ.25.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (3)ರ ಆದೇಶದನ್ವಯ, ರಾಜ್ಯ ಯೋಜನೆಗಳಿಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಶೇ.25 ರಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ (4) ರಲ್ಲಿನ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ, ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರವರ ಅಧ್ಯಕ್ಷತೆಯಲ್ಲಿ ದಿನಾಂಕ 30.04.2019 ರಂದು ನಡೆದ Project Empowered Committee ಯ ಸಭೆಯಲ್ಲಿ ನಿರ್ಣಯಿಸಿದಂತೆ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (KWDP-II) ಸುಜಲ-III (EAP) ಬಾಹ್ಯ ನೆರವಿನ ಯೋಜನೆಯಡಿ ರೂ.1074.22 ಲಕ್ಷಗಳನ್ನು ಜಲಾನಯನ ಅಭಿವೃದ್ಧಿ ಇಲಾಖೆಯಿಂದ ತೋಟಗಾರಿಕೆ ಇಲಾಖೆಗೆ ಮರುವಿನಿಯೋಗ ಮಾಡಿರುತ್ತದೆ.

..2)

ಮೇಲೆ ಓದಲಾದ (5) ರಲ್ಲಿನ ಪ್ರಸ್ತಾವನೆಯಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರು ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ–II (KWDP-II) ಸುಜಲ–III (EAP) ಬಾಹ್ಯ ನೆರವಿನ ಯೋಜನೆಯ ಲೆಕ್ಕ ಶೀರ್ಷಿಕೆ: 2402–00–102–0–28 ಅಡಿಯಲ್ಲಿ ಈ ಪೈಕಿ ರೂ.25.00 ಕೋಟಿಗಳ ಅನುದಾನ ಬಿಡುಗಡೆಯಾಗಿದೆ. ಸದರಿ ಯೋಜನೆಯು ಡಿಸೆಂಬರ್–2019ಕ್ಕೆ ಮುಕ್ತಾಯಗೊಳ್ಳುವ ಕಾರಣ, ಪ್ರಸ್ತುತ ಬಿಡುಗಡೆಗೆ ಬಾಕಿ ಇರುವ ರೂ.14,25,78,000/- ಗಳ ಬಿಡುಗಡೆ ಮಾಡಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (6) ರ ಸರ್ಕಾರದ ಆದೇಶದಲ್ಲಿ, ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ–II (KWDP-II) ಸುಜಲ–III (EAP) ಯೋಜನೆಯನ್ನು 2020–21 ರಿಂದ 2024–25 (2024 ಡಿಸೆಂಬರ್) ವರೆಗೆ ಮುಂದುವರೆಸಲು ಆದೇಶಿಸಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/61/ಕೃಯೋಕಾ/2019, ಬೆಂಗಳೂರು, ದಿನಾಂಕ: 07–01–2020.**

[redacted] ಜಲಾನಯನ ಅಭಿವೃದ್ಧಿ ಯೋಜನೆ–II (KWDP-II) ಸುಜಲ–III (EAP) ಯೋಜನೆಯಡಿ 2019–20ನೇ ಸಾಲಿಗೆ ಲೆಕ್ಕ ಶೀರ್ಷಿಕೆ: 2402–00–102–0–28 (ಯೋಜನೆ) ರಲ್ಲಿ ಬಿಡುಗಡೆಗೆ ಬಾಕಿ ಇರುವ ಅನುದಾನ ರೂ.1425.78 ಲಕ್ಷ (ಹದಿನಾಲ್ಕು ಕೋಟಿ ಇಪ್ಪತ್ತೈದು ಲಕ್ಷ ಎಪ್ಪತ್ತೆಂಟು ಸಾವಿರ ಮಾತ್ರ) ಗಳನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ/785/ವೆಚ್ಚ–4/2019, ದಿನಾಂಕ: 30–12–2019 ರಲ್ಲಿ ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2019, ದಿನಾಂಕ: 04–07–2019 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಪ್ರತ್ಯಾಯೋಜನೆ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಎನ್. ರಾಜೇಶ್ವರಿ 07/01/2020
(ಎನ್. ರಾಜೇಶ್ವರಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕೃಷಿ ಇಲಾಖೆ (ಯೋಜನೆ).

ಇವರಿಗೆ:–

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–1.

..3)

2. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–1.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಆಯುಕ್ತರು / ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
6. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ–4), ವಿಧಾನಸೌಧ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ಬೆಂಗಳೂರು
10. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿಯನ್ನು ಮಾಹಿತಿಗಾಗಿ –</u>

1. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ–1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು.

*****